Off : 080-2287 4039
080-2235 4085
Fax : 080-2228 5591
Email : comhfw@gmail.com

# COMMISSIONERATE

## Health & Family Welfare and Ayush Services

ಸಂಖ್ಯೆ:ಆಡಳಿತ/90/2018-19

ದಿನಾಂಕ:02.11.2018

## ಸುತ್ತೋಲೆ

ವಿಷಯ: ಸಾರ್ವಜನಿಕ ಸಂಪರ್ಕಾಧಿಕಾರಿಗಳನ್ನು ನೇಮಿಸುವ ಬಗ್ಗೆ

***

ಗಣ್ಯವ್ಯಕ್ತಿಗಳು, ಜನಪ್ರತಿನಿಧಿಗಳು, ಸಾರ್ವಜನಿಕರಿಗೆ ಆಸ್ಪತ್ರೆಗಳಲ್ಲಿ ಸರಿಯಾಗಿ ಸ್ಪಂದನೆ ಸಿಗದಿರುವುದಾಗಿ ಅನೇಕ ದೂರುಗಳು ಬರುತ್ತಿವೆ. ಇದರಿಂದ ಇಲಾಖೆಯ ಕಾರ್ಯವೈಖರಿ ಬಗ್ಗೆ ವ್ಯಾಪಕ ಟೀಕೆಗೆ ಗುರಿಯಾಗುವ ಸಂದರ್ಭಗಳನ್ನು ಎದುರಿಸಬೇಕಾಗಿದೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಗಣ್ಯವ್ಯಕ್ತಿಗಳು, ಜನಪ್ರತಿನಿಧಿಗಳು, ಸಾರ್ವಜನಿಕರುಗಳಿಗೆ ಸೂಕ್ತ ಚಿಕಿತ್ಸಾ ಸೌಲಭ್ಯಗಳು ಸುಲಭವಾಗಿ ದೊರಕಿಸುವ ನಿಟ್ಟಿನಲ್ಲಿ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಸ್ಥಾನೀಯ ವೈದ್ಯಾಧಿಕಾರಿಗಳನ್ನು ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಆಡಳಿತ ವೈದ್ಯಾಧಿಕಾರಿಗಳನ್ನು ಸಾರ್ವಜನಿಕ ಸಂಪರ್ಕ ಅಧಿಕಾರಿಗಳನ್ನಾಗಿ ನೇಮಿಸುವಂತೆ ಸೂಚಿಸಲಾಗಿದೆ

ಆಯುಕ್ತರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.
ಬೆಂಗಳೂರು.

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು/ವೈದ್ಯಕೀಯ ಅಧೀಕ್ಷಕರು.
3. ಕಛೇರಿ ಪ್ರತಿ.

3rd Floor, IPP Building, Anand Rao Circle, Bangalore - 560 009.

Scanned by CamScanner

Off : 080-2287 4039
080-2235 4085
Fax : 080-2228 5591
Email : comhfw@gmail.com

# COMMISSIONERATE
## Health & Family Welfare and Ayush Services

ಸಂಖ್ಯೆ:ಆಡಳಿತ/90/2018-19

ದಿನಾಂಕ:02.11.2018

## ಸುತ್ತೋಲೆ

ವಿಷಯ: ಗೌರವಾನ್ವಿತ ಸಂಸದರು ಹಾಗೂ ಶಾಸಕರುಗಳ ಪತ್ರಗಳಿಗೆ ಆದ್ಯತೆ ನೀಡುವ ಬಗ್ಗೆ.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗೌರವಾನ್ವಿತ ಲೋಕಸಭಾ ಸದಸ್ಯರು, ರಾಜ್ಯಸಭಾ ಸದಸ್ಯರು, ವಿಧಾನಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ತಿನ ಸದಸ್ಯರುಗಳು ತಮ್ಮ ಕ್ಷೇತ್ರಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಇತರೆ ಸಲಹೆ ಸೂಚನೆಗಳನ್ನು ನೀಡಿ ಪತ್ರಗಳನ್ನು ಈ ಇಲಾಖೆಗೆ ಸಲ್ಲಿಸಿರುತ್ತಾರೆ. ಸದರಿ ಪತ್ರಗಳಲ್ಲಿಯ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಿ ಆದ್ಯತೆಯ ಮೇಲೆ ಕ್ರಮವಹಿಸಿ ಕೂಡಲೇ ಸಮಸ್ಯೆಗಳನ್ನು ಬಗೆಹರಿಸುವುದು ಹಾಗೂ ಸಲಹೆ ಸೂಚನೆಗಳನ್ನು ಗಣನೆಗೆ ತೆಗೆದುಕೊಂಡು ನಿಯಮಾನುಸಾರ ಸೂಕ್ತ ಕ್ರಮವಹಿಸಲು ಸೂಚಿಸಿದೆ.

ರಾಜ್ಯದ ಎಲ್ಲಾ ಆಸ್ಪತ್ರೆ, ಆರೋಗ್ಯ ಕೇಂದ್ರಗಳಲ್ಲಿ ಆರೋಗ್ಯ ರಕ್ಷಾ ಸಮಿತಿಗಳನ್ನು ರಚಿಸಲಾಗಿದೆ. ಅವುಗಳ ಸಭೆಗಳನ್ನು ನಿಯಮಿತವಾಗಿ ನಡೆಸಲು ಸೂಚಿಸಿದೆ ಹಾಗೂ ಸದರಿ ಸಭೆಗಳನ್ನು ನಡೆಸುವಾಗ ಸಂಬಂಧಿಸಿದ ವಿಧಾನಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ತಿನ ಸದಸ್ಯರುಗಳು ಹಾಗೂ ಸಂಬಂಧಿಸಿದ ಜನಪ್ರತಿನಿಧಿಗಳನ್ನು ಕಡ್ಡಾಯವಾಗಿ ಸಭೆಗಳಿಗೆ ಆಹ್ವಾನಿಸಿ ಅವರುಗಳನ್ನು ಸಭೆಯ ಕಾರ್ಯಕಲಾಪದಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಲು ಸೂಚಿಸಿದೆ.

ಆಯುಕ್ತರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.
ಬೆಂಗಳೂರು.

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು/ವೈದ್ಯಕೀಯ ಅಧೀಕ್ಷಕರು.
3. ಕಛೇರಿ ಪ್ರತಿ.

Scanned by CamScanner